# 1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಪ್ಪಳ, (ಗಂಗಾವತಿ ಆಸೀನ)

## M.V.C. No.453/2020

ಇಂದು ದಿನಾಂಕ- **01.08.2026** ರಂದು ಸಾಕ್ಷಿಯನ್ನು ತೆರೆದ ನ್ಯಾಯಾಲಯದ ಸಾಕ್ಷಿ ಕಟ್ಟೆಯಲ್ಲಿ ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಮುಂದುವರಿದ ಮುಖ್ಯ ವಿಚಾರಣೆ - ಅರ್ಜಿದಾರರ ಪರ ವಕೀಲರಿಂದ -**

ನಾನು ಹಾಜರುಪಡಿಸಿರುವ ದಾಖಲೆಗಳನ್ನು ನಿಶಾನೆಗಳನ್ನಾಗಿ ಗುರುತಿಸಬೇಕಾಗಿ ಪ್ರಾರ್ಥನೆ.

| | |
|---|---|
| ನಿ.ಪಿ.-11 | ಬಿಡುಗಡೆ ಸಾರಾಂಶ |
| ನಿ.ಪಿ.-12 | ಆಸ್ಪತ್ರೆ ಹಾಗೂ ಔಷಧಿ ಬಿಲ್ಲುಗಳು |
| ನಿ.ಪಿ.-13 | ವೈದ್ಯಕೀಯ ವರದಿಗಳು |
| ನಿ.ಪಿ.-14 | ಕ್ಷ-ಕಿರಣಗಳು |

ಎಂದು ಗುರುತಿಸಿದ್ದೇನೆ.

ಆದ್ದರಿಂದ ಅರ್ಜಿಯಲ್ಲಿ ಕೇಳಿರುವಂತೆ ಆದೇಶಿಸಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀಸವಾಲು - 3 ನೇ ಎದುರುದಾರರ ಪರ ವಕೀಲರಿಂದ-**

ಅಪಘಾತದ ಸಮಯದಲ್ಲಿ ನಾನು ಆಟೋದಲ್ಲಿ ಹೋಗುತ್ತಿದ್ದೆನು. ಆಟೋದಲ್ಲಿ 20 ಜನ ಪ್ರಯಾಣಿಕರು ಇದ್ದರು ಎಂದರೆ ಸರಿಯಲ್ಲ. ಆಟೋದಲಿ ನಿಗದಿತ ಜನಕ್ಕೂ ಹೆಚ್ಚು ಜನ ಪ್ರಯಾಣಿಸುತ್ತಿದ್ದರು ಎಂದರೆ ಸರಿಯಲ್ಲ. ಆಟೋದಲ್ಲಿ 3 ಜನ

ಪ್ರಯಾಣಿಸುತ್ತಿದ್ದರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆಟೋದಲ್ಲಿ ಹೆಚ್ಚಿನ ಪ್ರಯಾಣಿಸುತ್ತಿದ್ದ ಕಾರಣ ಅದರ ಚಾಲಕನಿಗೆ ನಿಯಂತ್ರಣ ತಪ್ಪಿ ಅಪಘಾತವಾಗಿದೆ ಎಂದರೆ ಸರಿಯಲ್ಲ. ಅಪಘಾತದ ಸಮಯದಲ್ಲಿ ನನ್ನ ವಯಸ್ಸು 17 ವರ್ಷ. ಅಪಘಾತದಿಂದ ನನಗೆ ಯಾವುದೇ ಗಾಯಗಳು ಆಗಿರಲಿಲ್ಲ ಎಂದರೆ ಸರಿಯಲ್ಲ. ನಾನು ಅಪಘಾತಕ್ಕೂ ಮೊದಲು ಇದ್ದಂತೆ ಈಗಲೂ ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ನನಗೆ ಯಾವುದೇ ಶಸ್ತ್ರಚಿಕಿತ್ಸೆ ಆಗಿಲ್ಲ ಎಂದರೆ ಸರಿಯಲ್ಲ. ನಾನು ಪರಿಹಾರ ಪಡೆಯಲು ವೈದ್ಯಕೀಯ ದಾಖಲಾತಿಗಳನ್ನು ಸೃಷ್ಟಿಸಿ ತಂದು ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಅಂಗನ್ಯೂನ್ನತ ಪ್ರಮಾಣ ಪತ್ರವನ್ನು ಹಾಜರುಪಡಿಸಿಲ್ಲ ಎಂದರೆ ಸರಿ. ನನಗೆ ಯಾವುದೇ ಅಂಗನ್ಯೂನ್ಯತೆ ಇಲ್ಲ ಎಂದರೆ ಸರಿಯಲ್ಲ. ನಾನು ಅಪಘಾತದ ಸಮಯದಲ್ಲಿ ಖಾಸಗಿ ವೃತ್ತಿ ಮಾಡುತ್ತಿದ್ದೆನು ಹಾಗೂ ಅದರಿಂದ ನನಗೆ ಮಾಸಿಕ ರೂ.15,000/- ಆದಾಯವಿತ್ತು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಯಾವುದೇ ದುಡಿಮೆ ಮಾಡುತ್ತಿರಲಿಲ್ಲ ಹಾಗೂ ನನಗೆ ಯಾವುದೇ ಆದಾಯವಿರಲಿಲ್ಲ ಎಂದರೆ ಸರಿಯಲ್ಲ. ನಾನು ಆಗ ಅಪ್ರಾಪ್ತ ವಯಸ್ಕನಾಗಿದ್ದ ಕಾರಣ ಹಾಗೂ ಕಾಲೇಜಿಗೆ ಹೋಗುತ್ತಿದ್ದ ಕಾರಣ ಯಾವುದೇ ಉದ್ಯೋಗ ಮಾಡುತ್ತಿದ್ದಿಲ್ಲ ಎಂದರೆ ಸರಿಯಲ್ಲ. ಆಟೋ ಚಾಲಕನಿಗೆ ಚಾಲನಾ ಪರವಾನಗಿ ಇಲ್ಲದಿದ್ದ ಕಾರಣ 3 ನೇ ಎದುರುದಾರರು ನನಗೆ ಪರಿಹಾರ ನೀಡಲು ಬಾಧ್ಯರಲ್ಲ ಎಂದರೆ ಸರಿಯಲ್ಲ. ಆಟೋರಿಕ್ಷಾಗೆ ಅಪಘಾತದ ಸಮಯದಲ್ಲಿ ಪರವಾನಗಿ ಹಾಗೂ ಕ್ಷಮತೆ ಪ್ರಮಾಣ ಪತ್ರ (Fitness Certificate) ಊರ್ಜಿತ ಇರಲಿಲ್ಲ ಎಂದರೆ ಸರಿಯಲ್ಲ. ಆಟೋ ಮಾಲೀಕರು ಪ್ರಯಾಣಿಕರಿಗೆ ಸಂಬಂಧಪಟ್ಟಂತೆ ಯಾವುದೇ ವಿಮಾ ಹಣವನ್ನು ಪಾವತಿಸಿರಲಿಲ್ಲ ಎಂದರೆ ಸರಿಯಲ್ಲ.

3 ನೇ ಎದುರುದಾರರು ನನಗೆ ಪರಿಹಾರ ನೀಡಲು ಬಾಧ್ಯರಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಚಿಕಿತ್ಸೆಗೆ ರೂ.2,00,000/- ಖರ್ಚಾಗಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲು - 1 ನೇ ಎದುರುದಾರರ ಪರ ವಕೀಲರಿಂದ-**

ಗೈರು ಹಾಜರಿದ್ದು, ಪಾಟೀಸವಾಲು ಇಲ್ಲವೆಂದು ಪರಿಗಣಿಸಲಾಯಿತು.

**ಮರು ವಿಚಾರಣೆ - ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ, ನನ್ನ ಉಕ್ತಲೇಖನದ ಮೇರೆಗೆ ಗಣಕಯಂತ್ರದಲ್ಲಿ ಬೆರಳಚ್ಚುಗಾರರಿಂದ ಬೆರಳಚ್ಚು ಮಾಡಿಸಲಾಗಿದೆ.)

ಓ. ಹೇ. ಕೇ. ಸರಿ ಇದೆ.

(**ವೇದಮೂರ್ತಿ ಬಿ.ಎಸ್.**)
1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೊಪ್ಪಳ (ಗಂಗಾವತಿ ಪೀಠ).